# ಮಳೆ ಹಾನಿ: ವಿಶೇಷ ಪ್ಯಾಕೇಜ್‌ಗೆ ಸಿಎಂಗೆ ಪತ್ರ

ಉಪ್ರ 15/10/20

ಬೆಂಗಳೂರು: ರಾಜ್ಯದಲ್ಲಿ ಅತಿವೃಷ್ಟಿಯಿಂದ ಹಾನಿಯಾಗಿರುವ ಬೆಳೆ ಸಮೀಕ್ಷೆ ನಡೆಸಿ ಪರಿಹಾರಕ್ಕಾಗಿ ವಿಶೇಷ ಪ್ಯಾಕೇಜ್ ಘೋಷಣೆ ಮಾಡಬೇಕು ಹಾಗೂ ಕೂಡಲೇ ಖರೀದಿ ಕೇಂದ್ರಗಳನ್ನು ತೆರೆದು ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಿರುವ ಮೊತ್ತಕ್ಕಾದರೂ ರೈತರು ಬೆಳೆದ ಉತ್ಪನ್ನಗಳನ್ನು ಖರೀದಿ ಮಾಡುವಂತೆ ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಆಗ್ರಹಿಸಿದ್ದಾರೆ.



ಈ ಕುರಿತು ಮುಖ್ಯಮಂತ್ರಿ ಯಡಿಯೂರಪ್ಪಗೆ ಪತ್ರ ಬರೆದು, ಅಕ್ಟೋಬರ್, ನವೆಂಬರ್ ತಿಂಗಳಲ್ಲಿ ಅಗತ್ಯಕ್ಕಿಂತ ಹೆಚ್ಚು ಮಳೆಯಾದರೆ ರೈತರ ಪಾಲಿಗೆ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗುತ್ತದೆ. ಈ ವರ್ಷದ ಮುಂಗಾರಿನಲ್ಲಿ ಬಿತ್ತನೆ ಮಾಡಿದ್ದ ಹೆಸರು, ಉದ್ದು ಮುಂತಾದ ಬೆಳೆಗಳನ್ನು ಕುಯಿಲು ಮಾಡುವ ಸಂದರ್ಭದಲ್ಲಿ ವಿಪರೀತ ಮಳೆ ಸುರಿದು ಗಿಡದಲ್ಲೇ ಮೊಳಕೆ ಬಂದು ಕೊಳೆತು ಹೋದವು. ಈಗ ಈರುಳ್ಳಿ, ಶೇಂಗಾ, ಹತ್ತಿ, ಮೆಣಸಿನ ಕಾಯಿ, ರಾಗಿ, ಮುಸುಕಿನ ಜೋಳ, ಬಿಳಿ ಜೋಳ ಮುಂತಾದ ಬೆಳೆಗಳು ಸಹ ಹೊಲದಲ್ಲೇ ಕೊಳೆತು ಹೋಗುತ್ತಿವೆ.

ಕಲ್ಯಾಣ ಕರ್ನಾಟಕ ಮತ್ತು ಮುಂಬೈ ಕರ್ನಾಟಕದ ಭಾಗಗಳಲ್ಲಿ ಬೆಳೆ ಜತೆಗೆ ಸ್ಥಿರಾಸ್ತಿಗಳೂ ನಾಶವಾಗಿವೆ. ದವಸ-ಧಾನ್ಯ, ಹಸುಗಳು ನೀರಿನಲ್ಲಿ ಕೊಚ್ಚಿ ಹೋಗುತ್ತಿರುವ ದೃಶ್ಯಗಳು ದುರಂತದ ಪ್ರಮಾಣವನ್ನು ವಿವರಿಸುತ್ತಿವೆ. ತಗ್ಗಿನ ಪ್ರದೇಶಗಳಲ್ಲಿ ಬೆಳೆ ಜತೆಗೆ ಸ್ಥಿರಾಸ್ತಿ ಕಳೆದುಕೊಂಡ ಬಡ ರೈತರು ಮತ್ತೆ ತಮ್ಮ ಕುಟುಂಬವನ್ನು ಕಟ್ಟಿ ನಿಲ್ಲಿಸಿಕೊಳ್ಳಲು ಐದಾರು ವರ್ಷಗಳೇ ಬೇಕಾಗಬಹುದು. ಪದೇ ಪದೆ ದುರಂತಗಳಿಗೆ ಬಲಿಯಾಗುತ್ತಿರುವ ರೈತರ ನೆರವಿಗೆ ಬರದ ಸರ್ಕಾರ ಅತ್ಯಂತ ಕ್ರೂರಿ ಸರ್ಕಾರವೆನ್ನಿಸಿಕೊಳ್ಳುತ್ತದೆ ಎಂದು ಹೇಳಿದ್ದಾರೆ.

ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ನೀಡಲು ಸಾಧ್ಯವಾಗದಿದ್ದರೆ 90 ಸಾವಿರ ಕೋಟಿ ಸಾಲ ಮಾಡುವ ಅಗತ್ಯವೇನಿದೆ? ರಾಜ್ಯದ ಬಿಜೆಪಿ ಸಂಸದರೂ ಕೇಂದ್ರದಿಂದ ರಾಜ್ಯದ ಪಾಲಿನ ಜಿಎಸ್‌ಟಿ ಬಾಕಿ, ವಿಶೇಷ ಪ್ಯಾಕೇಜ್ ಕೊಡಿಸುವಲ್ಲಿ ವಿಫಲವಾಗಿದ್ದಾರೆ. ಈ ಸಂಧರ್ಭದಲ್ಲಿ ರಾಜ್ಯ ಸರ್ಕಾರ ರೈತರ ನೆರವಿಗೆ ಬರಬೇಕು ಎಂದು ಪತ್ರದ ಮೂಲಕ ಆಗ್ರಹಿಸಿದ್ದಾರೆ.

## 2ನೇ ಹಂತದ ಮಳೆಹಾನಿ ಸಮೀಕ್ಷೆಗೆ ಸೂಚನೆ

ಕಲಬುರಗಿ: ರಾಜ್ಯದಲ್ಲಿ ಎರಡನೇ ಹಂತದಲ್ಲಿ ಭಾರೀ ಮಳೆಯಿಂದ ಆಗಿರುವ ಹಾನಿ ಕುರಿತು ಸಮೀಕ್ಷೆ ನಡೆಸುವಂತೆ ಎಲ್ಲ ಜಿಲ್ಲಾಧಿಕಾರಿಗಳು, ಸಿಇಒಗಳಿಗೆ ಸೂಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್. ಈಶ್ವರಪ್ಪ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಸಕ್ತ ವರ್ಷ ಮೊದಲ ಹಂತದ ಮಳೆ ಹಾನಿ ಮಾಹಿತಿ ಸಂಗ್ರಹಿಸಲಾಗಿದೆ. ಈಗ ಮತ್ತೆ ಮಳೆ ಸುರಿಯಲು ಆರಂಭಿಸಿದ್ದು, ನಷ್ಟ ಮತ್ತು ಹಾನಿ ಬಗ್ಗೆ ಸಮೀಕ್ಷೆಗೆ ಸೂಚಿಸಲಾಗಿದೆ. ಮಳೆಗೆ ಹಾಳಾಗಿರುವ ರಸ್ತೆ ಮತ್ತು ಸೇತುವೆಗಳ ದುರಸ್ತಿಗೆ ಇಲಾಖೆಯಿಂದ ಕ್ರಮ ಕೈಗೊಳ್ಳಲಾಗುವುದು. ಕಳೆದ ಬಾರಿಯೂ ಉತ್ತರ ಕರ್ನಾಟಕ ಭಾಗದಲ್ಲಿ ಭಾರೀ ಮಳೆಯಿಂದ ಪ್ರವಾಹ ಉಂಟಾಗಿತ್ತು. ಆಗ ರಾಜ್ಯ ಸರ್ಕಾರ 1,500 ಕೋಟಿ ಹಣ ಬಿಡುಗಡೆ ಮಾಡಿತ್ತು. ಈಗ ಚುನಾವಣೆ ಇರುವುದರಿಂದ ಭರವಸೆ ನೀಡಲು ಬರುವುದಿಲ್ಲ ಎಂದರು.

